**ಪ್ರಧಾನ ಸಿವಿಲ್ ನ್ಯಾಯಾಧೀಶರ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ನಂಜನಗೂಡು, ಮೈಸೂರು ಜಿಲ್ಲೆ.**

## ಸಿ.ಸಿ.ನಂ. 1133/2018

| | | |
|---|---|---|
| ಸಾಕ್ಷಿದಾರರ ಹೆಸರು | : | ಈಶ್ವರ |
| ತಂದೆಯ ಹೆಸರು | : | ಆರ್ಮುಗಮ್ |
| ವಯಸ್ಸು | : | 41 ವರ್ಷ |
| ಉದ್ಯೋಗ | : | ಸೆಂಟರಿಂಗ್ ಕೆಲಸ |
| ವಾಸಸ್ಥಳ | : | ಹುಲ್ಲಹಳ್ಳಿ, ನಂಜನಗೂಡು ತಾ. |

**ಸಾಕ್ಷಿಯನ್ನು ದಿನಾಂಕಃ 28.07.2025 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ ಮಾನ್ಯ ಸ. ಸ. ಅ. ರವರಿಂದಃ**

ಈಗ ನನಗೆ ತೋರಿಸುತ್ತಿರುವ ನಿಪಿ-2 ರಲ್ಲಿ ನನ್ನ ಸಹಿ ಇದ್ದು, ಸದರಿ ಸಹಿಯನ್ನು ಹುಲ್ಲಹಳ್ಳಿ ಪೊಲೀಸ್ ಠಾಣೆಯಲ್ಲಿ ಹಾಕಿರುತ್ತೇನೆ. ಸಾಕ್ಷಿಯು ನಿಪಿ-2 ರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದರಿಂದ, ಸಾಕ್ಷಿಯ ಸಹಿಯನ್ನು ನಿಪಿ-2(ಸಿ) ಎಂದು ಗುರುತಿಸಲಾಯಿತು. ನಿ.ಪಿ-2 ರಲ್ಲಿ ಏನೆಲ್ಲಾ ಬರೆದಿದೆ ಎಂದು ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ಯಾವುದೇ ಮಹಜರ್ ಮಾಡಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಬೇಕೆಂದು ಮಾನ್ಯ ಸ.ಸ.ಅ ಕೋರಲಾಗಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.)

**ಪಾಟೀ ಸವಾಲುಃ ಸ.ಸ.ಅ ರವರಿಂದಃ**

ಆರೋಪಿಗಳು ಚಾಸಾ-1 ರವರ ಜೊತೆ ಗಲಾಟೆ ಮಾಡಿ, ಹಲ್ಲೆ ಮಾಡಿದ ವಿಚಾರವಾಗಿ ಪೊಲೀಸರು ದಿನಾಂಕ 07.09.2017 ರಂದು ಕಣೇನೂರು ಗ್ರಾಮದ ಎಲ್ಲೆಗೆ ಸೇರಿದ ಸರ್ವೆ ನಂ. 30/3 ರ ಜಮೀನಿಗೆ ಬಂದು ನನ್ನ ಮತ್ತು ಚಾಸಾ-3 ರವರ ಸಮಕ್ಷಮ ನಿಪಿ-2 ರಂತೆ

ಮಹಜರ್ ಮಾಡಿರುತ್ತಾರೆ ಎಂದರೆ ಸರಿಯಲ್ಲ. ನಾನು ಮಹಜರ್ ವಿಷಯಗಳನ್ನು ತಿಳಿದುಕೊಂಡೇ ಸ್ಥಳದಲ್ಲಿ ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ನನ್ನ ಸಮಕ್ಷಮ ಮಹಜರ್ ಮಾಡಿದ್ದರೂ ಕೂಡ ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ** ಏನೂ ಇರುವುದಿಲ್ಲ.

**(ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)**

**ಓ ಹೇ ಕೇ ಸಾ ಸ ಇ ಒ.,**

ಸಹಿ/-

**ಪ್ರಧಾನ ಸಿವಿಲ್ ನಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.,**
**ನಂಜನಗೂಡು.**